ದಿನಾಂಕಃ **14-06-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ 7 ನೇ ಪ್ರತಿವಾದಿ ಪರ ಶ್ರೀ ಕೆ ಪಿ ಎಂ ವಕೀಲರಿಂದ,**

1) ದಾವಾ ಅನುಸೂಚಿ ಸ್ವತ್ತುಗಳು ನನ್ನ ತಂದೆಗೆ ಭೂ ನ್ಯಾಯ ಮಂಡಳಿಯಿಂದ ಮಂಜೂರಾಗಿರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿ ಪುನಃ ನುಡಿದು ದಾವಾ ಸ್ವತ್ತುಗಳು ನನ್ನ ತಂದೆಯ ಸ್ವಯಾರ್ಜಿತ ಸ್ವತ್ತುಗಳಾಗಿರುತ್ತವೆ. ದಿಃ 15-11-1983 ರಂದು ಪಂಚಾಯ್ತಿ ಪಾಲುಪಟ್ಟಿ ಮೂಲಕ ದಾವಾ ಸ್ವತ್ತುಗಳನ್ನು ವಿಭಾಗ ಮಾಡಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚಾಯ್ತಿ ಪಾಲುಪಟ್ಟಿಗೆ ನಾನೂ ಸಹ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಪಂಚಾಯ್ತಿ ಪಾಲು ಪಟ್ಟಿ ಮೂಲಕ ಬಂದ ಆಸ್ತಿಗಳನ್ನು ಪ್ರತ್ಯೇಕವಾಗಿ ಖಾತೆ ಆಗಿರುತ್ತದೆ ಎಂದರೆ ಸರಿಯಲ್ಲ. 3 ನೇ ಪ್ರತಿವಾದಿಗೆ ಬಂದ ಆಸ್ತಿಗಳನ್ನು ಬೇರೆಯವರಿಗೆ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 2 ನೇ ಪ್ರತಿವಾದಿಯ ಗಂಡ ಮಾದೇಗೌಡ ರವರು ದಿಃ 16-08-1970 ರಂದು ಹಕ್ಕು ಬಿಡುಗಡೆ ಪತ್ರ ಮಾಡಿಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನನ್ನ ತಂದೆ ನನ್ನ ಮತ್ತು ಇತರೆ ವಾದಿಗಳ ವಿರುದ್ಧ ಅ.ದಾವೆ ನಂ. 135/1982 ರಂತೆ ದಾವೆ ಸಲ್ಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ದಾವೆ ನನ್ನ ತಂದೆ ಪರವಾಗಿ ಡಿಕ್ರಿ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ.

2) ಸರ್ವೆ ನಂ. 306/1 ರಲ್ಲಿ 19 ಗುಂಟೆ ನನ್ನ ತಂದೆಯ ಭಾಗಕ್ಕೆ ಬಂದಿರುತ್ತದೆ ಎಂದರೆ ಸರಿ. ಅದೇ ರೀತಿ ಚಂದಗಾಲು ಗ್ರಾಮದ ಸರ್ವೆ ನಂ. 323/1 ರಲ್ಲಿ 25 ಗುಂಟೆ ವಿಸ್ತೀರ್ಣ 2 ನೇ ಪ್ರತಿವಾದಿಯ ಗಂಡನ ಭಾಗಕ್ಕೆ ಬಂದಿರುತ್ತದೆ ಎಂದರೆ ಸರಿ. ಚೀರ್ನಹಳ್ಳಿ ಗ್ರಾಮದ ನಾಡಹಂಚಿನ ಮನೆ ಮತ್ತು ಮಂಗಳೂರು ಹಂಚಿನ ಮನೆ ಮಾದೇಗೌಡರ ಭಾಗಕ್ಕೆ ಬಂದಿರುತ್ತದೆ ಎಂದರೆ ಸರಿಯಲ್ಲ. ಸರ್ವೆ ನಂ. 326/1 ರಲ್ಲಿ 29 ಗುಂಟೆ ಜಮೀನು 3 ನೇ ಪ್ರತಿವಾದಿ ಭಾಗಕ್ಕೆ ಬಂದಿರುತ್ತದೆ ಎಂದರೆ ಸರಿಯಲ್ಲ. ಸರ್ವೆ ನಂ. 306/2 ರಲ್ಲಿ 19 ಗುಂಟೆ

ಜಮೀನನ್ನು ರಾಣಿ ಎಂಬುವವರ ಮದುವೆಗಾಗಿ ನನ್ನ ತಂದೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸರ್ವೆ ನಂ. 306/1 ರಲ್ಲಿ 33 ಗುಂಟೆ 7 ನೇ ಪ್ರತಿವಾದಿಯ ಭಾಗಕ್ಕೆ ಬಂದಿರುತ್ತದೆ ಎಂದರೆ ಸರಿ.

3) ದಿಃ 18-04-1974 ರಲ್ಲಿ 1 ನೇ ಪ್ರತಿವಾದಿ ಕಾಳಮ್ಮ ರವರಿಂದ ಸರ್ವೆ ನಂ. 63/2 ರಲ್ಲಿ 1 ಎಕರೆ 36 ಗುಂಟೆ ಮತ್ತು ಸರ್ವೆ ನಂ. 63/3 ರಲ್ಲಿ 38 ಗುಂಟೆ ಮತ್ತು ಸರ್ವೆ ನಂ. 67/1 ರಲ್ಲಿ 1 ಎಕರೆ 35 ಗುಂಟೆ ಯನ್ನು ಕ್ರಯಕ್ಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮೇಲ್ಕಂಡ ಆಸ್ತಿಗಳು 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ. 4 ನೇ ಪ್ರತಿವಾದಿ ಗಜೇಂದ್ರನಿಗೆ ಬಂದ ಭಾಗದ ಆಸ್ತಿಗಳನ್ನು ದಿಃ 29-11-1995 ರಂದು ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿಗೆ ಮೈಸೂರಿನ ಮನೆ ಮತ್ತು 6 ನೇ ಪ್ರತಿವಾದಿಗೆ ಚೌಕಹಳ್ಳಿ ಮನೆಯನ್ನು ಭಾಗದಲ್ಲಿ ನೀಡಿರುತ್ತಾರೆ ಎಂದರೆ ಸರಿ. ಸದರಿಯವರು ಅವರ ತಂದೆಗೆ ಹಕ್ಕು ಖುಲಾಸೆ ಪತ್ರ ಬರೆದುಕೊಟ್ಟಿರುತ್ತಾರೆ ಎಂದರೆ ಸರಿ.

4) 3 ನೇ ಪ್ರತಿವಾದಿ ಅವರ ಭಾಗಕ್ಕೆ ಬಂದ ಆಸ್ತಿಯನ್ನು ದಿಃ 28-01-2012 ರಲ್ಲಿ ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. 3 ನೇ ಪ್ರತಿವಾದಿಯ ಹೆಂಡತಿ ಮತ್ತು ಮಕ್ಕಳು ದಿಃ 12-12-1997 ರಲ್ಲಿ ಇತರೆ ಜಮೀನುಗಳನ್ನು ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಸ್ವತ್ತುಗಳು ರಾಮೇಗೌಡರ ಸ್ವಯಾರ್ಜಿತ ಆಸ್ತಿಗಳು ಎಂದರೆ ಸರಿಯಲ್ಲ. ದಿಃ 29-11-1995 ರಂದು ಗಜೇಂದ್ರರವರ ಭಾಗಕ್ಕೆ ಬಂದ ಆಸ್ತಿಗಳನ್ನು ಇಳಿಬೋಗ್ಯ ಮಾಡಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ಕ್ರಯಕ್ಕೆ ಪಡೆದ ಆಸ್ತಿಗಳನ್ನು ಅವರ ಮಗನಿಗೆ ಮರಣ ಶಾಸನದ ಮೂಲಕ ವಿಲ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>** ಪ್ರತಿವಾದಿ 5 ಪರ ವಕೀಲರು ಕಾಲಾವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ.